# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 648 (691) |
| ಮಾನ್ಯ ಸದಸ್ಯರ ಹೆಸರು | ಶ್ರೀ ಪ್ರತಾಪ್ ಸಿಂಹ ನಾಯಕ್.ಕೆ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 12 /12/2025 |
| ಉತ್ತರಿಸುವವರು | ಮಾನ್ಯ ಕಾರ್ಮಿಕ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯಿಂದ, ಕಾರ್ಮಿಕರಿಗೆ ಆಸ್ಪತ್ರೆ ಚಿಕಿತ್ಸೆ ವೆಚ್ಚದ ಮರುಪಾವತಿಯ ಸಂದರ್ಭದಲ್ಲಿ ಅತ್ಯಂತ ಅಲ್ಪ ಮೊತ್ತ ಮಾತ್ರ ಪಾವತಿಯಾಗುತ್ತಿರುವ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ; | ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯ ವತಿಯಿಂದ ನೋಂದಾಯಿತ ಫಲಾನುಭವಿಗಳು ಹಾಗೂ ಅವರ ಅವಲಂಬಿತರಿಗೆ ಈ ಕೆಳಕಂಡ ವೈದ್ಯಕೀಯ ಸಹಾಯಧನ ನೀಡಲಾಗುತ್ತಿದೆ.<br>1. **ವೈದ್ಯಕೀಯ ಸಹಾಯ ಧನ (ಕಾರ್ಮಿಕ ಆರೋಗ್ಯ ಭಾಗ್ಯ):** ನೋಂದಾಯಿತ ಫಲಾನುಭವಿ ಹಾಗೂ ಅವರ ಅವಲಂಭಿತರಿಗೆ **ರೂ. 300/- ರೂ.20,000/-**ವರೆಗೆ.<br>2. **ಪ್ರಮುಖ ವೈದ್ಯಕೀಯ ವೆಚ್ಚ ಸಹಾಯಧನ (ಕಾರ್ಮಿಕ ಚಿಕಿತ್ಸಾ ಭಾಗ್ಯ)**: ರೂ.2,00,000/- ಗಳ ವರೆಗೆ.<br>ಈ ಸಹಾಯಧನವನ್ನು ನಿಯಮಾನುಸಾರ ಸಿಜಿಹೆಚ್‌ಎಸ್ ದರಗಳನ್ವಯ ವೈದ್ಯಕೀಯ ವೆಚ್ಚ ಮರು ಪಾವತಿ ಮಾಡಲಾಗುತ್ತಿದೆ. |
| ಆ) | ಪ್ರಸ್ತುತ ಕಟ್ಟಡ ಮತ್ತು ಇತರ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯಲ್ಲಿ ಕಾರ್ಮಿಕರಿಗೆ ಪ್ರಯೋಜನ ಶೂನ್ಯವಾದ ಹೆಲ್ತ್ ಚೆಕ್‌ಅಪ್ ಕ್ಯಾಂಪ್ ಹಾಗೂ ಆರ್ ಪಿಎಲ್ ಟ್ರೈನಿಂಗ್ ಕ್ಯಾಂಪ್‌ಗಳು, ಸಂಚಾರಿ ವಾಹನ ಚಿಕಿತ್ಸೆಗಳು ಹಾಗೂ ಇನ್ನಿತರ ಕಾರ್ಯಕ್ರಮಗಳಿಗೆ ಒತ್ತು ನೀಡಿ, ಟೆಂಡರ್ ರೂಪದಲ್ಲಿ ಮಂಡಳಿಯ | ಕಟ್ಟಡ ನಿರ್ಮಾಣದ ಸ್ಥಳದಲ್ಲಿಯೇ ಕಾರ್ಮಿಕರ ಆರೋಗ್ಯ ತಪಾಸಣೆ ನಡೆಸುವುದರಿಂದ ಅವರುಗಳು ಬಳಲುತ್ತಿರುವ ಖಾಯಿಲೆಗಳನ್ನು ಪತ್ತೆ ಹಚ್ಚಿ ಸಮಯಕ್ಕೆ ಸರಿಯಾಗಿ ಚಿಕಿತ್ಸೆ ನೀಡಿ ಅವರುಗಳ ಉತ್ತಮ ಆರೋಗ್ಯವನ್ನು ಕಾಪಾಡುವ ಉದ್ದೇಶದಿಂದ ಈ ಕಾರ್ಮಿಕರಿಗೆ ಪ್ರಯೋಜನ ಶೂನ್ಯವಾದ ಹೆಲ್ತ್ ಚೆಕ್‌ಅಪ್ ಕ್ಯಾಂಪ್ ಹಾಗೂ ಸಂಚಾರಿ ವಾಹನ ಚಿಕಿತ್ಸೆಗಳನ್ನು ಒದಗಿಸಲಾಗುತ್ತಿದೆ. |

| | | |
|---|---|---|
| | ಹಣ ಅಪವ್ಯಯ ಆಗುತ್ತಿದೆ ಎಂದು ರಾಜ್ಯದ ಹಲವು ಕಡೆ ವಿವಿಧ ಕಾರ್ಮಿಕ ಸಂಘಟನೆಗಳು ಈಗಾಗಲೇ ಪ್ರತಿಭಟಿಸುತ್ತಿದ್ದು, ಈ ಬಗ್ಗೆ ಸರ್ಕಾರದ ನಿಲುವೇನು ಹಾಗೂ ಈ ಕುರಿತು ಸರ್ಕಾರ ಕೈಗೊಂಡ ಕ್ರಮಗಳೇನು; | ಕಟ್ಟಡ ಕಾರ್ಮಿಕರ ಕೌಶಲ್ಯವನ್ನು ಅಭಿವೃದ್ಧಿ ಪಡಿಸುವ ಉದ್ದೇಶದಿಂದ ಆರ್‌ಪಿಎಲ್ ಟ್ರೈನಿಂಗ್ ಕ್ಯಾಂಪ್‌ಗಳನ್ನು ಆಯೋಜಿಸಲಾಗುತ್ತಿದೆ. |
| ಇ) | ಕಾರ್ಮಿಕರಿಗೆ ಸಂಬಂಧಿಸಿದ ಆಸ್ಪತ್ರೆ ಚಿಕಿತ್ಸೆಯ ವೆಚ್ಚವನ್ನು ನಗದು ರಹಿತ ಚಿಕಿತ್ಸೆಯ ವೆಚ್ಚದ ರೂಪದಲ್ಲಿ ರಾಜ್ಯದ ಎಲ್ಲಾ ಖಾಸಗಿ ಆಸ್ಪತ್ರೆಗಳಲ್ಲಿ ಲಭಿಸುವಂತೆ ಮಾಡಲು ಸರ್ಕಾರ ಈ ಕೂಡಲೇ ಅಗತ್ಯ ಹಾಗೂ ಸೂಕ್ತ ಕ್ರಮ ವಹಿಸುವುದೇ? | ಮಂಡಳಿಯ ವತಿಯಿಂದ ಆಸ್ಪತ್ರೆ ಚಿಕಿತ್ಸೆಯ ವೆಚ್ಚವನ್ನು ನಗದು ರಹಿತ ಚಿಕಿತ್ಸೆಯ ವೆಚ್ಚದ ರೂಪದಲ್ಲಿ ಒದಗಿಸುವ ನಿಟ್ಟಿನಲ್ಲಿ ಫಲಾನುಭವಿಗಳು ಆಯುಷ್ಮಾನ್ ಭಾರತ್ - ಆರೋಗ್ಯ ಕರ್ನಾಟಕ ಯೋಜನೆಯಡಿ ರೂ.5.00 ಲಕ್ಷಗಳ ಮಿತಿಯನ್ನು ತಲುಪಿದಲ್ಲಿ, ಹೆಚ್ಚುವರಿಯಾಗಿ ರೂ.2.00 ಲಕ್ಷಗಳವರೆಗೆ ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್ ಮೂಲಕವೇ ವೆಚ್ಚವನ್ನು ಮರುಪಾವತಿ ಮಾಡಲು ಮಂಡಳಿವತಿಯಿಂದ ಕ್ರಮವಹಿಸಲಾಗುತ್ತಿದೆ. |

**ಕಾಇ 474 ಎಲ್‌ಇಟಿ 2025**

**(ಸಂತೋಷ್ ಎಸ್ ಲಾಡ್)**
**ಕಾರ್ಮಿಕ ಸಚಿವರು**